**ದಿನಾಂಕ: 04.12.2021 ರಂದು ವಾರ್ಡ್ ಸಂಖ್ಯೆ 184 ಉತ್ತರಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

1. ಶ್ರೀ ಡಿ.ಸುಂದರಯ್ಯ- ವಾರ್ಡ್ ಸಮಿತಿ ನೋಡಲ್ ಅಧಿಕಾರಿ
2. ಶ್ರೀ ವೆಂಕಟರಮಣ.ಕೆ.ವಿ - ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ವಾರ್ಡ್ 184 ಉತ್ತರಹಳ್ಳಿ)
3. ಡಾ// ದೀಕ್ಷಿತ - ಕೋವಿಡ್-19 ಆರೋಗ್ಯ ವೈದ್ಯಾಧಿಕಾರಿಗಳು, ಬೆಂಗಳೂರು ದಕ್ಷಿಣ ವಿಭಾಗ
4. ಶ್ರೀಮತಿ ರೇಷ್ಮ.ಸಿ.ಎಸ್- ಬೃಹತ್ ನೀರುಗಾಲುವೆ
5. ಶ್ರೀ ಶಶಿಕುಮಾರ್.ಎಸ್ - ಹಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
6. ಶ್ರೀ ವೆಂಕಟೇಶ್.ಕೆ – ಘನತ್ಯಾಜ್ಯ ಮೇಲ್ವಿಚಾರಕರು
7. ಶ್ರೀ ಮೋಸೀಸ್ - ಘನತ್ಯಾಜ್ಯ ಮೇಲ್ವಿಚಾರಕರು
8. ಶ್ರೀ ಸಿದ್ದರಾಜು - ಬೀದಿ ದೀಪಗಳ ನಿರ್ವಹಣೆ

***ಹಾಜರಿದ್ದ ಸಮಿತಿ ಸದಸ್ಯರು:-***

1. ಶ್ರೀ ಅರುಣ್ - ಎ.ಜಿ.ಎಸ್ ಬಡಾವಣೆ RWo
2. ಶ್ರೀ ಅಮರ್.ಎಂ.ಆರ್ - ಎ.ಜಿ.ಎಸ್ ಬಡಾವಣೆ RWA
3. ಶ್ರೀ ಎಸ್.ಕೆ.ಸುದೀಂದ್ರ - ಪೂರ್ಣಪ್ರಜ್ಞಾಲೇಔಟ್ ಬಡಾವಣೆ RWA

ಮೇಲೆ ಹಾಜರಿದ್ದ ಸಮಿತಿ ಸದಸ್ಯರ ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ವಾರ್ಡ್ ಸಮಿತಿ ನೋಡಲ್ ಅಧಿಕಾರಿಯಾದ ಶ್ರೀ ಡಿ.ಸುಂದರಯ್ಯ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು, ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಸದರಿ ಸಭೆಯಲ್ಲಿ ಈ ಕೆಳಕಂಡಂತೆ ವಿವಿಧ ವಿಷಯಗಳ ಬಗ್ಗೆ ವಾರ್ಡ್ ಸಮಿತಿಯು ವಿವರವಾಗಿ ಚರ್ಚಿಸಿದಂತೆ ಮುಂದಿನ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿ / ಇಲಾಖೆಗಳಿಗೆ ಸ್ರಚಿಸಲಾಗಿರುತ್ತದೆ.

1. **<u>ಕೋವಿಡ್-19ಗೆ ಸಂಬಂಧಪಟ್ಟಂತೆ.</u>**
   - ಉತ್ತರಹಳ್ಳಿ ಪಿ.ಹೆಚ್.ಸಿ ರವರು ವಾರ್ಡ್ ವ್ಯಾಪ್ತಿಯಲ್ಲಿನ ಸಾರ್ವಜನಿಕರು 1ನೇ ಡೋಸ್ ಲಸಿಕೆಯನ್ನು ಹಾಕಿಸಿಕೊಳ್ಳಬೇಕೆಂದು ಕೋರಿರುತ್ತಾರೆ.
   - ವಾರ್ಡ್ ವ್ಯಾಪ್ತಿಯಲ್ಲಿನ ವಿದೇಶದಿಂದ ಬಂದಿರುವ ಸಾರ್ವಜನಿಕರು 14 ದಿನಗಳ ಕ್ವಾರಂಟೈನ್ ಆಗಲು ಸೂಚಿಸಿರುತ್ತಾರೆ.
2. **<u>ಬೃಹತ್ ನೀರು ಗಾಲುವೆ ಇಲಾಖೆ ಸಂಬಂಧಪಟ್ಟಂತೆ.</u>**
   - ಎ.ಜಿ.ಎಸ್ ಬಡಾವಣೆಯಲ್ಲಿ ಬರುವ ಬೃಹತ್ ನೀರು ಗಾಲುವೆಯಲ್ಲಿ ಹೂಳನ್ನು ತೆರವುಗೊಳಿಸಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಬೃಹತ್ ನೀರು ಗಾಲುವೆ ಬೊಮ್ಮನಹಳ್ಳಿ ರವರಿಗೆ ಸೂಚಿಸಿರುತ್ತಾರೆ.

3. **ಬೀದಿ ದೀಪಗಳ ನಿರ್ವಹಣೆಗೆ ಸಂಬಂಧಪಟ್ಟಂತೆ.**

- ಎ.ಜಿ.ಎಸ್.ಬಡಾವಣೆಯ ಪಾರ್ಕ್-2 ರಲ್ಲಿನ ವಿದ್ಯುತ್ ದೀಪದ ಬಲ್ಬ್‌ಗಳು ಹಾಳಾಗಿದ್ದು, ಹೊಸದಾಗಿ ಬಲ್ಬ್‌ಗಳನ್ನು ಅಳವಡಿಸಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರು ಎಲೆಕ್ಟ್ರಿಕಲ್ ಬೊಮ್ಮನಹಳ್ಳಿ ವಲಯ ರವರಿಗೆ ಸೂಚಿಸಿರುತ್ತಾರೆ.

4. **ಬೆಂಗಳೂರು ನೀರು ಮತ್ತು ಒಳಚರಂಡಿ ಇಲಾಖೆಗೆ ಸಂಬಂಧಪಟ್ಟಂತೆ**

- ಎ.ಜಿ.ಎಸ್ ಬಡಾವಣೆಯ ಪವರ್ ಸ್ಟೇಷನ್ ಮುಂಭಾಗದ ರಸ್ತೆಯಲ್ಲಿ ಹೊಸದಾಗಿ ಒಳಚರಂಡಿ ಸಂಪರ್ಕವನ್ನು ಕಲ್ಪಿಸಲು ಕೋರಿರುತ್ತಾರೆ.

ಈ ಬಗ್ಗೆ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಂಗಳೂರು ಕುಡಿಯುವ ನೀರು ಮತ್ತು ಒಳಚರಂಡಿ ಮಂಡಳಿ ರವರಿಗೆ ಸೂಚಿಸಿರುತ್ತಾರೆ.

5. **ಸ.ಕಾ.ನಿ.ಅ ಉತ್ತರಹಳ್ಳಿ ಉಪವಿಭಾಗಕ್ಕೆ ಸಂಬಂಧಪಟ್ಟಂತೆ**

- 110 ಹಳ್ಳಿಗಳ ಯೋಜನೆ ಅಡಿಯಲ್ಲಿ ಎ.ಜಿ.ಎಸ್ ಬಡಾವಣೆಯಲ್ಲಿ ಚರಂಡಿ ಹೂಳನ್ನು ಸಮರ್ಪಕವಾಗಿ ತೆರವುಗೊಳಿಸಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಹಾಯಕ ಕಾರ್ಯಪಾಲಕ ಅಭಿಯಂತರರು ಉತ್ತರಹಳ್ಳಿ ಉಪವಿಭಾಗ ರವರಿಗೆ ಸೂಚಿಸಿರುತ್ತಾರೆ

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷೆಯೊಂದಿಗೆ ಈ ಸದರಿ ಸಭೆಯಲ್ಲಿ ಈ ಕೆಳಕಂಡ ಇಲಾಖೆಯ ಅಧಿಕಾರಿಗಳು / ಸಿಬ್ಬಂದಿಗಳು ಹಾಜರಾಗಿರುವುದಿಲ್ಲವೆಂದು ವಾರ್ಡ್ ಕಮಿಟಿಯ ಸದಸ್ಯರು ಆಕ್ಷೇಪಣೆಯನ್ನು ವ್ಯಕ್ತಪಡಿಸಿರುವುದರಿಂದ ಈ ಕೆಳಕಂಡ ಇಲಾಖೆಯ ಅಧಿಕಾರಿಗಳು ಮುಂದಿನ ಸಭೆಯಲ್ಲಿ ತಪ್ಪದೇ ಹಾಜರಾಗಲು ಸೂಚಿಸುತ್ತಾ, ಸಮಿತಿಯ ಅಧ್ಯಕ್ಷರಾದ ಶ್ರೀ ಡಿ.ಸುಂದರಯ್ಯ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| ಕ್ರ.ಸಂ | ಇಲಾಖೆಯ ಹೆಸರು |
|---|---|
| 1 | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 2 | ಬೆಸ್ಕಾಂ ಇಲಾಖೆ |
| 3 | ತೋಟಗಾರಿಕೆ ಅಧಿಕಾರಿಗಳು, ಬೊಮ್ಮನಹಳ್ಳಿ ವಲಯ |
| 4 | ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಬೊಮ್ಮನಹಳ್ಳಿ |
| 5 | ಅರಣ್ಯ ಇಲಾಖೆ, ಬೊಮ್ಮನಹಳ್ಳಿ, |
| 6 | ಪೋಲೀಸ್ ಇಲಾಖೆ |

ಶ್ರೀ ಡಿ.ಸುಂದರಯ್ಯ
ನೋಡಲ್ ಅಧಿಕಾರಿ ಹಾಗೂ ಸ.ಕಾ.ನಿ.ಅ
ಉತ್ತರಹಳ್ಳಿ ಉಪವಿಭಾಗ

ಶ್ರೀ ವೆಂಕಟರಮಣ.ಕೆ.ವಿ
ಸಂಚಾಲಕರು ಹಾಗೂ ಸ.ಅ-184